# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 167 | Pages. 2 | Date: 10-06-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 167 - ಪುಟಗಳು : 2 | 10-06-2026 | ಬುಧವಾರ | Ph: 8762954248 | ದರ : ₹1


## ಅ.7ರಂದು ಮತದಾರರ ಅಂತಿಮ ಪಟ್ಟಿ ಪ್ರಕಟ

### ಎಸ್‌ಐಆರ್‌ಗೆ ಅಗತ್ಯ ಸಿದ್ಧತೆ | ಜೂ. 30ರಿಂದ ಒಂದು ತಿಂಗಳು ಮನೆ ಭೇಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಚುನವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ತಿಳಿಸಿದ್ದಾರೆ.

ಉಪವಿಭಾಗಾಧಿಕಾರಿ ಕಚೇರಿಯಲ್ಲಿ ಮಂಗಳವಾರ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿಗೆ ಅರ್ಹ ಮತದಾರರ ಸೇರ್ಪಡೆ ಹಾಗೂ ಅನರ್ಹ ಮತದಾರರನ್ನು ಕೈಬಿಡವುದು ಮುಖ್ಯ ಉದ್ದೇಶವಾಗಿದೆ ಎಂದರು.

ಹಾಸನ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆಗೆ ಸಿದ್ಧತೆ ಮಾಡಿಕೊಂಡಿದ್ದು, ಜೂ. 30 ರಿಂದ ಜು. 29ರ ವರೆಗೆ ಮತದಾರರ ಮನೆಗೆ ಭೇಟಿ ನೀಡಿ ಗಣತಿ ಪ್ರಮಾಣ ಪತ್ರ ಭರ್ತಿ ಮಾಡಲಾಗುತ್ತದೆ ಎಂದು ಹೇಳಿದರು.



ಕ್ಷೇತ್ರದಲ್ಲಿ ಎಸ್‌ಐಆರ್ ಪ್ರಕ್ರಿಯೆಗಾಗಿ 275 ಸಿಬ್ಬಂದಿ, 64 ಬಿಎಲ್‌ಒ ಹಾಗೂ 5 ತರಬೇತುದಾರರ ನಿಯೋಜಿಸಲಾಗಿದೆ. ಚುನಾವಣಾ ಆಯೋಗದ ನಿರ್ದೇಶನದಂತೆ ಮ್ಯಾಪಿಂಗ್ ಕಾರ್ಯ ನಡೆಸಲಾಗಿದೆ. ಶೇ. 95 ರಷ್ಟು ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದೆ. ಈ ವೇಳೆ ಪ್ರಕ್ರಿಯೆಯಿಂದ ಹೊರಗುಳಿದವರು ಆತಂಕಕ್ಕೆ ಒಳಗಾಗದೆ ಮತ್ತೊಮ್ಮೆ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು. ಮತಗಟ್ಟೆ ಅಧಿಕಾರಿಗಳ ಮನೆ-ಮನೆ ಭೇಟಿ ಅವಧಿಯಲ್ಲಿ ಮತದಾರರು ಲಭ್ಯವಿಲ್ಲದಿದ್ದರೆ 3 ಬಾರಿ ಭೇಟಿ ನೀಡುತ್ತಾರೆ. ಬೆಳಿಗ್ಗೆ 10 ಗಂಟೆ ಒಳಗೆ ಹಾಗೂ ಸಂಜೆ 5ರ ನಂತರ ಮನೆ ಭೇಟಿಗೆ ಸೂಚಿಸಲಾಗಿದೆ. ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯಬಾರದೆಂಬ ಉದ್ದೇಶದಿಂದ ಕ್ರಮ ಕೈಗೊಳ್ಳಲಾಗಿದೆ ಎಂದರು.

ಗಣತಿ ಪ್ರಮಾಣ ಪತ್ರದಲ್ಲಿ ಮತದಾರರ ವಿವರಗಳನ್ನು ಭರ್ತಿ ಮಾಡಿ ಸಂಬಂಧಪಟ್ಟವರ ಸಹಿ ಪಡೆದು ನಂತರ ಆ್ಯಪ್‌ನಲ್ಲಿ ಅಪ್ಲೋಡ್ ಮಾಡಲಾಗುತ್ತದೆ. ಮತಗಟ್ಟೆ ಅಧಿಕಾರಿಗಳು ಮನೆ ಭೇಟಿಗೆ ಬರುವ ಮೊದಲು ಮತಗಟ್ಟೆ ಏಜೆಂಟರೊಂದಿಗೆ ಸಭೆ ನಡೆಸಬೇಕು.

#### ಮತದಾರರು ಗಮನಿಸಬೇಕಾದ ಅಂಶ

2026ರ ಅ. 1 ವಿಶೇಷ ಸಮಗ್ರ ಪರಿಷ್ಕರಣೆಗೆ ಅರ್ಹತಾ ದಿನವಾಗಿದೆ. ಜೂನ್ 20 ರಿಂದ 29ರ ವರೆಗೆ ಪೂರ್ವ ತಯಾರಿ, ತರಬೇತಿ ಮತ್ತು ಮುದ್ರಣಕ್ಕೆ ವ್ಯವಸ್ಥೆ ಮಾಡಿಕೊಳ್ಳುವುದು. ಜೂನ್ 30 ರಿಂದ ಜುಲೈ 29ರ ವರೆಗೆ ಮತಗಟ್ಟೆ ಅಧಿಕಾರಿಗಳಿಂದ ಮನೆ ಮನೆ ಭೇಟಿ, ಜುಲೈ 29 ಮತಗಟ್ಟೆಗಳ ಪುನರ್ ವಿಂಗಡಣೆ ಕಾರ್ಯ, ಆ. 5ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದೆ. ಆ. 5ರಿಂದ ಸೆ. 4ರ ವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಿದೆ. ಅಂತಿಮವಾಗಿ ಅ. 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟವಾಗಲಿದೆ ಎಂದು ಮಾಹಿತಿ ನೀಡಿದರು.

ಮ್ಯಾಪಿಂಗ್ ಪ್ರಕ್ರಿಯೆಯಿಂದ ಕೈಬಿಟ್ಟಿರುವವರು ಆತಂಕಕ್ಕೆ ಒಳಗಾಗದೆ ಕೆಲ ನಿಮಯಗಳನ್ನು ಪಾಲಿಸಬೇಕಾಗುತ್ತದೆ. 1987ರ ಜುಲೈ 1 ರಿಂದ 2004ರ ಜನವರಿ 1ರ ಅವಧಿಯಲ್ಲಿ ಜನಿಸಿರುವವರು ಕಡ್ಡಾಯವಾಗಿ ತಮ್ಮ ಜನನ ಪ್ರಮಾಣ ಪತ್ರ ಸಲ್ಲಿಸಬೇಕು. ಅಗತ್ಯ ದಾಖಲಾತಿಗಳು ಇಲ್ಲದಿದ್ದರೆ ಬ್ಯಾಂಕ್ ಪಾಸ್‌ಬುಕ್ ಅಥವಾ ಯಾವುದಾರರು ಅಧಿಕೃತ ಗುರುತಿನ ಚೀಟಿ ಸಲ್ಲಿಸಬೇಕು. 2004ರ ಬಳಿಕ ಜನಿಸಿದವರು ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ನೀಡುವುದನ್ನು ಕಡ್ಡಾಯಗೊಳಿಸಿದೆ ಎಂದು ತಿಳಿಸಿದರು.

ಮಾನ್ಯತೆ ಪಡೆದ ರಾಜಕೀಯ ಪಕ್ಷಗಳಿಗೆ ಬಿಎಲ್‌ಎಗಳ ನೇಮಿಸುವಂತೆ ಮೇ 27ರಂದು ಸೂಚಿಸಲಾಗಿದೆ ಎಂದರು.

ಮತಗಟ್ಟೆ ಅಧಿಕಾರಿಗಳಿಗೆ ಎಲ್ಲಾ ದಾಖಲಾತಿ ಸಲ್ಲಿಸಿದ ಬಳಿಕವೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಪ್ರಕಟವಾಗದಿದ್ದರೆ, ತಮಗೆ ಗೊತ್ತಿರುವಂತೆ ಮರಣ ಹೊಂದಿದವರ ಹೆಸರು ಸೇರಿದ್ದರೆ ಅಂತಹ ದೂರುಗಳನ್ನು ಆ. 5 ರಿಂದ ಸೆ. 9ರ ವರೆಗೆ ಸಲ್ಲಿಸಬಹುದು. ಈ ವಿಚಾರದಲ್ಲಿ ರಾಜಕೀಯ ಪಕ್ಷಗಳ ಏಜೆಂಟರು ಎಚ್ಚರಿಕೆ ವಹಿಸಬೇಕಾಗುತ್ತದೆಂದರು.

ತಹಶೀಲ್ದಾರ್ ಗೀತಾ ಹಾಜರಿದ್ದರು.

## ಸಕಲೇಶಪುರ: ಕಾಡಾನೆ ಭೀಮ ಪ್ರತ್ಯಕ್ಷ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಳೆದ ಹಲವು ದಿನಗಳಿಂದ ಸಾರ್ವಜನಿಕರ ಕಣ್ಣಿಗೆ ಬೀಳದ ಕಾಡಾನೆ ಭೀಮ

ಮಂಗಳವಾರ ಬೆಳ್ಳಂ ಬೆಳಿಗ್ಗೆ ತಾಲ್ಲೂಕಿನ ಕೆರೆಹಳ್ಳಿ ರಸ್ತೆಯಲ್ಲಿ ಪ್ರತ್ಯಕ್ಷವಾಗಿದೆ. ಆನೆಯನ್ನು ಕಂಡು ಭಯಭೀತರಾದ ಜನರು, ಒಂದೆಡೆ ರಸ್ತೆಯಲ್ಲಿ ವಾಹನಗಳನ್ನು ನಿಲ್ಲಿಸಿಕೊಂಡು ನಿಲ್ಲಬೇಕಾಯಿತು.

ಮತ್ತೊಂದೆಡೆ ಅರಣ್ಯ ಇಲಾಖೆ ಇಟಿಎಫ್ ಸಿಬ್ಬಂದಿ ಹೈ ಅಲರ್ಟ್ ಆಗಿ ಸುತ್ತಮುತ್ತಲ ಜನರಿಗೆ ಮಾಹಿತಿ ನೀಡಿದರು.

ಮೈಮೇಲೆ ಮಣ್ಣು ಸುರಿದುಕೊಂಡಿರುವ ಭೀಮ ಯಾರಿಗೂ ತೊಂದರೆ ಕೊಡದಂತೆ ರಸ್ತೆಯಲ್ಲಿ ನಿಧಾನವಾಗಿ ಹೆಜ್ಜೆ ಹಾಕಿದ. ಜನರೂ ಕೂಡ ಧೈರ್ಯದಿಂದ ಕಾಡಾನೆ ನೋಡುತ್ತಾ ಕೆಲ ಹೊತ್ತು ಹಾಗೆಯೇ ನಿಂತರು. ಹಾಗೆಯೇ ರಸ್ತೆ ದಾಟಿ ಕಾಫಿ ತೋಟದೊಳಗೆ ದೈತ್ಯಾಕಾರದ ಕಾಡಾನೆ ಭೀಮ ಹೆಜ್ಜೆ ಹಾಕಿತು. ಗುಂಪು ಅಗಲಿರುವ ಭೀಮ, ಇತ್ತೀಚೆಗೆ ಜನ ನಿಬಿಡ ಪ್ರದೇಶ ಹಾಗೂ ರಸ್ತೆಗಳಲ್ಲಿ ಭೀಮ ಕಾಣಿಸಿಕೊಳ್ಳುತ್ತಿದ್ದಾನೆ.

## ಮಹಿಳಾ ಸರ್ಕಾರಿ ಕಾಲೇಜು ರಸ್ತೆಗೆ ಕಬ್ಬಿಣದ ಸರಳು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಕೆ.ಆರ್ .ಪುರಂ ಗಂಧದಕೋಠಿ ಉದ್ಯಾನವನ ಹಾಗೂ ಮಹಿಳಾ ಸರ್ಕಾರಿ ಕಾಲೇಜು ಆವರಣದಲ್ಲಿ ನಡೆಯುತ್ತಿರುವ ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕುವ ಹಿನ್ನೆಲೆಯಲ್ಲಿ ಮುಖ್ಯ ರಸ್ತೆಗೆ ಕಬ್ಬಿಣದ ಸರಳು ಅಳವಡಿಸಲಾಗಿದೆ.

ವಿದ್ಯಾರ್ಥಿನಿಯರ ಸುರಕ್ಷತೆಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದ್ದರು. ಆ ಹಿನ್ನೆಲೆಯಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಗಂಗಣ್ಣ ಅವರು ಫಲ್ಗುಣಿ ಮುಂಭಾಗದ ಕಾಲೇಜು ರಸ್ತೆಗೆ ತಾತ್ಕಾಲಿಕವಾಗಿ ಕಬ್ಬಿಣದ ಸರಳು ಅಳವಡಿಸಿದ್ದಾರೆ. ಕಾಲೇಜಿನ ಒಳಗಡೆ ಬೈಕ್ ಸೇರಿ ಯಾವ ವಾಹನ ಓಡಾಡುವುದನ್ನು ತಡೆಗಟ್ಟಿದಂತಾಗಿದೆ.



**ಭದ್ರತಾ ಸಿಬ್ಬಂದಿ ನೇಮಿಸಿ:**

ಕಾಲೇಜು ಆವರಣದಲ್ಲಿ ನಡೆಯುತ್ತಿರುವ ಅನೈತಿಕ ಚಟುವಟಿಕೆಗೆ ಸಂಪೂರ್ಣ ಕಡಿವಾಣ ಹಾಕಲು ಎರಡೂ ಗೇಟ್‌ನಲ್ಲಿ ಭದ್ರತಾ ಸಿಬ್ಬಂದಿ ನೇಮಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಒಂದೇ ಕಡೆ ಮಹಿಳಾ ವಿಭಜಿತ ಕಾಲೇಜು ಸೇರಿ ಮೂರು ಸರ್ಕಾರಿ ಮಹಿಳಾ ಕಾಲೇಜುಗಳಿದ್ದು, 5000ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಕಾಲೇಜು ಆವರಣ ಹಾಗೂ ಸುತ್ತಮುತ್ತ ಅನೈತಿಕ ಮತ್ತು ಅಸಭ್ಯ ಚಟುವಟಿಕೆ ಹೆಚ್ಚಾಗಿವೆ. ವಿದ್ಯಾರ್ಥಿನಿಯರ ಸುರಕ್ಷತೆಗೆ ಧಕ್ಕೆಯಾಗುತ್ತಿದೆ. ಸಾರ್ವಜನಿಕರು, ಪುಂಡ-ಪೋಕರಿಗಳು ಕಾಲೇಜು ಸಮಯದಲ್ಲಿ ಬೈಕ್ ಹಾಗೂ ಕಾರುಗಳಲ್ಲಿ ಜೋರಾಗಿ ವಿಚಿತ್ರ ಶಬ್ದ ಮಾಡುತ್ತಾ ಕಾಲೇಜು ಆವರಣದೊಳಗೆ ಓಡಾಡುವುದು ಸಾಮಾನ್ಯವಾಗಿದೆ. ಕೆಲವರು ವಿದ್ಯಾರ್ಥಿನಿಯರನ್ನು ಚುಡಾಯಿಸುವುದು, ಅಸಭ್ಯವಾಗಿ ವರ್ತಿಸುವುದು ಹಾಗು ಪ್ರಶ್ನಿಸಿದ ಸಾರ್ವಜನಿಕರ ಮೇಲೆಯೇ ಹಲ್ಲೆ ನಡೆಸಿರುವ ಘಟನೆಗಳೂ ನಡೆದಿವೆ. ಅಲ್ಲದೆ ಸಂಜೆ ವೇಳೆಯಲ್ಲಿ ಕಾಲೇಜು ಆವರಣದಲ್ಲಿ ಗಾಂಜಾ ಸೇವನೆ, ಮದ್ಯಪಾನ, ಬಿಯರ್ ಬಾಟಲಿ ಎಸೆಯುವುದು ಮುಂತಾದ ಅನೈತಿಕ ಚಟುವಟಿಕೆ ನಿರಂತರವಾಗಿ ನಡೆಯುತ್ತಿವೆ. ಮದ್ಯಪಾನ ಮಾಡಿ ಸುತ್ತಲಿನ ಮನೆಗಳ ಮೇಲೆ ಕಲ್ಲು ತೂರುವುದು, ಬೈಕ್ ವ್ಹೀಲಿಂಗ್ ಹೆಚ್ಚಿದೆ. ಹಾಗಾಗಿ ಸೂಕ್ತ ಕ್ರಮ ಕೈಗೊಳ್ಳುವಂತೆ ನಿವಾಸಿಗಳಾದ ವೇಣುಗೋಪಾಲ್, ಜಯೇಂದ್ರ, ಕುಮಾರ್ ಜೈನ್, ತಿರುನಾರಾಯಣ ಅಯ್ಯಂಗಾರ್, ದಿನಕರ್, ಶೇಖರಣ್ಣ, ಮಹೇಶ್, ವಾಸು ಆಗ್ರಹಿಸಿದ್ದಾರೆ.

## ಕ್ರಾಫರ್ಡ್ ಆಸ್ಪತ್ರೆ ಅಭಿವೃದ್ಧಿಗೆ ಒತ್ತು: ಶಾಸಕ ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಹಂತ ಹಂತವಾಗಿ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಮಂಗಳವಾರ ಕ್ರಾಫರ್ಡ್ ಆಸ್ಪತ್ರೆ ಆವರಣದಲ್ಲಿ ವೈದ್ಯರ ನೂತನ ವಸತಿ ಗೃಹ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.



ಆರೋಗ್ಯ ಇಲಾಖೆಯ ವೈದ್ಯರು ಹಾಗೂ ಸಿಬ್ಬಂದಿ ಜಿಲ್ಲಾ ಕೇಂದ್ರಗಳಲ್ಲಿ ವಾಸವಿದ್ದು, ಕರ್ತವ್ಯಕ್ಕಾಗಿ ಪ್ರತಿದಿನ ತಾಲ್ಲೂಕು ಕೇಂದ್ರಗಳಿಗೆ ಸಂಚರಿಸುವ ಪರಿಸ್ಥಿತಿ ಇದೆ. ಅದರಿಂದ ಸಮಯ ವ್ಯರ್ಥವಾಗುವುದಲ್ಲದೆ ಸಾರ್ವಜನಿಕರಿಗೆ ಸಮಯಕ್ಕೆ ಸರಿಯಾಗಿ ವೈದ್ಯಕೀಯ ಸೇವೆ ದೊರೆಯುವುದಕ್ಕೂ ತೊಂದರೆಯಾಗುತ್ತದೆ. ಈ ಹಿನ್ನೆಲೆಯಲ್ಲಿ ವೈದ್ಯರು ಆಸ್ಪತ್ರೆ ಸಮೀಪದಲ್ಲೇ ವಾಸಿಸುವ ಅನುಕೂಲ ಕಲ್ಪಿಸುವ ಉದ್ದೇಶದಿಂದ ಸುಮಾರು 1.47 ಕೋಟಿ ರೂ. ವೆಚ್ಚದಲ್ಲಿ ಎರಡು ನೂತನ ವಸತಿ ಗೃಹಗಳ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿ ಸಮೀಪದಲ್ಲಿರುವ ಕಾರಣ ಯಾವುದೇ ಸಂದರ್ಭದಲ್ಲಿ ಅಪಘಾತಗಳು ಸಂಭವಿಸುವ ಸಾಧ್ಯತೆ ಇರುವುದರಿಂದ ತುರ್ತು ವೈದ್ಯಕೀಯ ಸೇವೆಗೆ ವೈದ್ಯರ ಲಭ್ಯತೆ ಅತ್ಯಂತ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ವೈದ್ಯರಿಗೆ ಉತ್ತಮ ವಸತಿ ವ್ಯವಸ್ಥೆ ಕಲ್ಪಿಸುವುದು ಆರೋಗ್ಯ ಸೇವೆಯ ಗುಣಮಟ್ಟ ಹೆಚ್ಚಿಸಲು ನೆರವಾಗಲಿದೆ ಎಂದರು.

ಮುಂದಿನ ದಿನಗಳಲ್ಲಿ ಕ್ರಾಫರ್ಡ್ ಆಸ್ಪತ್ರೆಗೆ ಅಗತ್ಯ ವೈದ್ಯಕೀಯ ಯಂತ್ರೋಪಕರಣ, ಆಸ್ಪತ್ರೆ ನವೀಕರಣ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದ ಕಾಮಗಾರಿಗಳನ್ನು ಶೀಘ್ರ ಆರಂಭಿಸಲಾಗುವುದು. ಆಸ್ಪತ್ರೆಯ ಸಮಗ್ರ ಅಭಿವೃದ್ಧಿಗೆ ಬದ್ಧತೆಯಿಂದ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ಹೇಳಿದರು.

ಹಿಂದಿನ ಆರೋಗ್ಯ ಸಚಿವರಾಗಿದ್ದ ದಿನೇಶ್ ಗುಂಡೂರಾವ್ ಅವರು ಸಲ್ಲಿಸಿದ ಮನವಿಗೆ ಸ್ಪಂದಿಸಿ ಆರ್ಥಿಕ ಇಲಾಖೆಯ ಅನುಮೋದನೆಯೊಂದಿಗೆ ಅನುದಾನ ಬಿಡುಗಡೆ ಮಾಡಿರುವುದನ್ನು ಶಾಸಕರು ಸ್ಮರಿಸಿದರು. ಪ್ರಸ್ತುತ ಆರೋಗ್ಯ ಸಚಿವರೂ ಸಹ ಈ ಅಭಿವೃದ್ಧಿ ಕಾರ್ಯಗಳಿಗೆ ಪೂರಕವಾಗಿ ಸ್ಪಂದಿಸುವ ವಿಶ್ವಾಸ ವ್ಯಕ್ತಪಡಿಸಿದರು.

ಸಕಲೇಶಪುರ ತಾಲೂಕಿಗೆ ಪ್ರತ್ಯೇಕ ತಾಯಿಮಗು ಆಸ್ಪತ್ರೆ ಮಂಜೂರಾತಿ ನೀಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದ ಅವರು, ಕ್ಷೇತ್ರದ ವಿವಿಧ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು, ಶುಶ್ರೂಷಕರು ಹಾಗೂ ಸಿಬ್ಬಂದಿಗಳ ಕೊರತೆ ಕುರಿತು ಈಗಾಗಲೇ ಸರ್ಕಾರದ ಗಮನಕ್ಕೆ ತರಲಾಗಿದ್ದು, ಮತ್ತೊಮ್ಮೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ಕ್ರಾಫರ್ಡ್ ವೈದ್ಯಾಧಿಕಾರಿ ಡಾ. ಅರುಣ್ ಕುಮಾರ್, ಪುರಸಭಾ ಮುಖ್ಯಾಧಿಕಾರಿ ಮಹೇಶ್ವರಪ್ಪ, ಪುರಸಭಾ ಮಾಜಿ ಸದಸ್ಯೆ ಅನ್ನಪೂರ್ಣ, ಆರೋಗ್ಯ ಇಲಾಖೆಯ ಸಹಾಯಕ ಅಭಿಯಂತರ ಸೇತುರಾಮ್, ಮುಖಂಡರಾದ ಅಗ್ನಿ ಸೋಮಶೇಖರ್, ನವೀನ್ ಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

## ಸೆ.17-21ರ ವರೆಗೆ ಮೈಸೂರಿನಲ್ಲಿ ರಾಯಲ್ ಮೆಗಾ ಎಕ್ಸ್ ಪೋ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶ್ರೀದತ್ತ ಎಂಟರ್‌ಪ್ರೈಸೆಸ್ ವತಿಯಿಂದ ಸೆ. 17 ರಿಂದ 21ರ ವರೆಗೆ ಮೈಸೂರಿನ ಮಹಾರಾಜ ಮೈದಾನದಲ್ಲಿ ರಾಯಲ್ ಮೈಸೂರು ಮೆಗಾ ಎಕ್ಸ್ ಪೋ-2026 ಹಾಗೂ ಇನ್ನೋವೇಶನ್ ಅಗ್ರಿಕಲ್ಚರ್ ಮತ್ತು ಆಯುರ್ವೇದ ಇಂಡಸ್ಟ್ರಿಯಲ್ ಮೆಷಿನರಿ ಪ್ರದರ್ಶನ ಆಯೋಜಿಸಲಾಗಿದೆ ಎಂದು ರಾಷ್ಟ್ರ ರಕ್ಷಣಾ ಸೇನೆಯ ಸುರೇಶ್‌ಗೌಡ ಮತ್ತು ಶ್ರೀದತ್ತ ಎಂಟರ್‌ಪ್ರೈಸೆಸ್ ಮೈಸೂರಿನ ಮಂಜುನಾಥ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಕೃಷಿ, ಆಯುರ್ವೇದ, ಸ್ಟಾರ್ಟ್‌ಅಪ್, ಗ್ರಾಮೀಣ ಕೈಗಾರಿಕೆ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಸೇರಿದಂತೆ ವಿವಿಧ ಕ್ಷೇತ್ರಗಳ ಉತ್ಪನ್ನಗಳು ಹಾಗೂ ನವೀನ ತಂತ್ರಜ್ಞಾನಗಳಿಗೆ ಒಂದೇ ವೇದಿಕೆ ಕಲ್ಪಿಸುವ ಉದ್ದೇಶದಿಂದ ಐದು ದಿನಗಳ ಬೃಹತ್ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದರು.

ವಿದ್ಯಾರ್ಥಿಗಳಲ್ಲಿನ ಸೃಜನಶೀಲತೆ ಮತ್ತು ಸಂಶೋಧನಾ ಮನೋಭಾವ ಬೆಳೆಸಲು ಅವರ ನವೀನ ಯೋಜನೆಗಳ ಪ್ರದರ್ಶನಕ್ಕೂ ವಿಶೇಷ ಅವಕಾಶ ನೀಡಲಾಗಿದೆ. ಮಹಿಳಾ ಉದ್ಯಮಿಗಳು, ದಿವ್ಯಾಂಗ ಉದ್ಯಮಿಗಳು ಹಾಗೂ ತೃತೀಯ ಲಿಂಗಿ ಉದ್ಯಮಿಗಳ ಆರ್ಥಿಕ ಸಬಲೀಕರಣಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಅರ್ಹರಿಗೆ ಉಚಿತ ಮಳಿಗೆಗಳನ್ನು ಒದಗಿಸಲಾಗುತ್ತಿದೆ. ಕೃಷಿ, ಆಹಾರ ಸಂಸ್ಕರಣೆ, ಸಾವಯವ ಉತ್ಪನ್ನಗಳು, ಆರೋಗ್ಯ ಮತ್ತು ಸೌಂದರ್ಯ, ಹಸ್ತಕಲಾ ವಸ್ತುಗಳು, ಗೃಹ ಕೈಗಾರಿಕೆ, ಜವಳಿ, ತಂತ್ರಜ್ಞಾನ, ಶಿಕ್ಷಣ ಹಾಗೂ ಸ್ಟಾರ್ಟ್‌ಅಪ್ ಸೇರಿದಂತೆ ವಿವಿಧ ಕ್ಷೇತ್ರಗಳ ಉತ್ಪನ್ನಗಳು ಮತ್ತು ಸೇವೆಗಳ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದರು.

## ಜೂ. 28ರಂದು ಜಿಲ್ಲಾದ್ಯಂತ ಪಲ್ಸ್ ಪೋಲಿಯೋ ಅಭಿಯಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ತಪ್ಪದಂತೆ ಹಾಕಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪಲ್ಸ್ ಪೋಲಿಯೋ ಚಾಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜೂ. 28 ರಂದು ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮವನ್ನು ನಿಗದಿತ ಬೂತ್ ಗಳಲ್ಲಿ ಹಾಗೂ ಅಂದು ಸಾರ್ವಜನಿಕರು ಪ್ರಯಾಣ ಮಾಡುವ ಸಂದರ್ಭದಲ್ಲಿ ಅನುಕೂಲವಾಗುವಂತೆ ರೈಲ್ವೆ ಹಾಗೂ ಬಸ್ ನಿಲ್ದಾಣಗಳಲ್ಲಿಯೂ ಲಸಿಕೆ ಹಾಕಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.




ವಲಸೆ ಕಾರ್ಮಿಕರ ಪತ್ತೆ ಹಚ್ಚಿ, ಕಾಫಿ ತೋಟಗಳಲ್ಲಿ ಕೆಲಸ ಮಾಡುವ ಹಾಗೂ ಕಟ್ಟಡ ನಿರ್ಮಾಣ ಕಾಮಗಾರಿ ನಡೆಯುತ್ತಿರುವ ಕಡೆಗಳಲ್ಲಿ ಮಕ್ಕಳಿಗೆ ತಪ್ಪದಂತೆ ಲಸಿಕೆ ನೀಡಲು ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಜೂ. 28 ರಂದು ಬೂತ್ ಮಟ್ಟದಲ್ಲಿ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ನಡೆಯಲಿದೆ.

ನಂತರ ನಗರ ಪ್ರದೇಶಗಳಲ್ಲಿ ಮೂರು ದಿನ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಎರಡು ದಿನ ಮನೆ ಮನೆಗೆ ಭೇಟಿ ನೀಡಿ ಲಸಿಕೆ ಹಾಕಲಾಗುವುದು ಎಂದು ತಿಳಿಸಿದರು.

ಲಸಿಕೆಯನ್ನು ಸುರಕ್ಷಿತವಾಗಿಡಲು ಕೋಲ್ಡ್ ಚೈನ್ ಲಿಂಕ್ ಇರಬೇಕಾಗಿರುವುದರಿಂದ ನಿರಂತರವಾಗಿ ವಿದ್ಯುತ್ ಸರಬರಾಜು ಇರುವಂತೆ ನೋಡಿಕೊಳ್ಳಬೇಕು.

ಲಸಿಕೆ ಸಂದರ್ಭದಲ್ಲಿ ಅಗತ್ಯ ಸಾರಿಗೆ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ಸಾರಿಗೆ ಇಲಾಖೆ ಅಧಿಕಾರಿಗೆ ಸೂಚಿಸಿದರು.

ಎಲ್ಲಾ ಅಧಿಕಾರಿಗಳು ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸಿ ಯಾವುದೇ ಮಗುವಿವು ಲಸಿಕೆಯಿಂದ ವಂಚಿತರಾಗದಂತೆ ನೋಡಿಕೊಳ್ಳಲು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನಿಲ್, ಆರ್‌ಸಿಹೆಚ್ ಅಧಿಕಾರಿ ಡಾ. ಶಿವಶಂಕರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಜಮೀರ್ ಅಹಮದ್ ಖಾನ್‌ಗೆ ಮಂತ್ರಿಸ್ಥಾನ ನೀಡಲು ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಚಿವ ಸಂಪುಟದಲ್ಲಿ ಶಾಸಕ ಜಮೀರ್ ಅಹಮದ್ ಖಾನ್ ಅವರಿಗೆ ಉಪಮುಖ್ಯಮಂತ್ರಿ ಹಾಗೂ ಮಂತ್ರಿ ಸ್ಥಾನ ನೀಡಬೇಕು ಎಂದು ಜಿಲ್ಲಾ ಅಲ್ಪಸಂಖ್ಯಾತ ಮುಸ್ಲಿಂ ಸ್ವಾಭಿಮಾನಿ ವೇದಿಕೆ ಅಧ್ಯಕ್ಷ ಸಮೀರ್ ಅಹಮದ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಜಮೀರ್ ಅಹಮದ್ ಖಾನ್ ಅವರನ್ನು ಕೇವಲ ಮುಸ್ಲಿಂ ಸಮುದಾಯದ ನಾಯಕ ಎಂದು ನೋಡುವುದು ಸರಿಯಲ್ಲ. ಅವರು ಜಾತ್ಯಾತೀತ ಚಿಂತನೆಯ ನಾಯಕನಾಗಿದ್ದು, ಎಲ್ಲ ಜಾತಿ-ಧರ್ಮದ ಜನರಲ್ಲಿ ಅಪಾರ ಅಭಿಮಾನಿಗಳನ್ನು ಹೊಂದಿದ್ದಾರೆ ಎಂದರು.

ಪಕ್ಷ ನೀಡಿದ ಪ್ರತಿಯೊಂದು ಜವಾಬ್ದಾರಿಯನ್ನೂ ಪ್ರಾಮಾಣಿಕವಾಗಿ ನಿರ್ವಹಿಸಿದ್ದಾರೆ. ಅವರು ಹಲವು ಚುನಾವಣೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿದ್ದಾರೆ. ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ಉಪ ಚುನಾವಣೆಯಲ್ಲಿ ಅವರ ಪಾತ್ರ ನಿರ್ಣಾಯಕವಾಗಿತ್ತು. ಅದಕ್ಕೂ ಮುನ್ನ 2023 ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ 136 ಸ್ಥಾನ ಗೆಲ್ಲಲು ಜಮೀರ್ ಅವರ ಕೊಡುಗೆಯೂ ಇದೆ ಎಂದು ಹೇಳಿದರು.




ದಾವಣಗೆರೆ ಉಪ ಚುನಾವಣೆಯಲ್ಲಿ ಅಭ್ಯರ್ಥಿ ಆಯ್ಕೆ ವಿಚಾರದಲ್ಲಿ ಉಂಟಾಗಿದ್ದ ಅಸಮಾಧಾನ ಶಮನಗೊಳಿಸಿ ಪಕ್ಷದ ಅಭ್ಯರ್ಥಿಯ ಗೆಲುವಿಗೆ ಕಾರಣರಾಗಿದ್ದಾರೆ. ಕರ್ನಾಟಕದ ಜೊತೆಗೆ ಕೇರಳದಲ್ಲೂ ಪಕ್ಷದ ಪರ ಪ್ರಚಾರ ನಡೆಸಿ ಉತ್ತಮ ಫಲಿತಾಂಶ ತರುವಲ್ಲಿ ಪ್ರಮುಖ ಪಾತ್ರ ವಹಿಸಿರುವ ಹಿನ್ನೆಲೆಯಲ್ಲಿ ಅವರನ್ನು ಎಐಸಿಸಿ ಅಲ್ಪಸಂಖ್ಯಾತ ವಿಭಾಗದ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ. ಆದರೆ ಇಷ್ಟು ಸಾಲದು, ಇಂತಹ ನಾಯಕನಿಗೆ ಹೊಸ ಸರ್ಕಾರದಲ್ಲಿ ಯಾವುದೇ ಉನ್ನತ ಹುದ್ದೆ ನೀಡದಿರುವುದು ಕೇವಲ ವ್ಯಕ್ತಿಗೆ ಮಾತ್ರವಲ್ಲ, ಇಡೀ ಮುಸ್ಲಿಂ ಸಮುದಾಯಕ್ಕೆ ಮಾಡಿದ ಅನ್ಯಾಯವಾಗಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಮುಸ್ಲಿಂ ಸಮುದಾಯಕ್ಕೆ ಜನಸಂಖ್ಯೆಗೆ ಅನುಗುಣವಾಗಿ ರಾಜಕೀಯ ಪ್ರಾತಿನಿಧ್ಯ ಸಿಗುತ್ತಿಲ್ಲ. ಚುನಾವಣಾ ಟಿಕೆಟ್ ಹಂಚಿಕೆ, ಸಚಿವ ಸಂಪುಟ ರಚನೆ ಹಾಗೂ ಬಜೆಟ್ ಹಂಚಿಕೆಯಲ್ಲೂ ಅನ್ಯಾಯ ಮಾಡಲಾಗಿದೆ. ಒಟ್ಟಾರೆ ಸಮುದಾಯವನ್ನು ಕಡೆಗಣಿಸಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಮಾಜ ಸೇವಕ ಮೊಹಮ್ಮದ್ ಶರ್ಫುದ್ದೀನ್, ಸದಸ್ಯ ವಸೀಂ ಖಾನ್ ಇದ್ದರು.

ಕನ್ನಡ ಪೋಸ್ಟ್

E-mail : kannadapostnews@gmail.com facebook.com / ಕನ್ನಡ post



# ಅರಕಲಗೂಡು ಸೌಂದರ್ಯಕ್ಕೆ ಕಸದ ರಾಶಿ ಕಂಟಕ

## ಸಾರ್ವಜನಿಕರಿಂದ ನಿಯಮ ಉಲ್ಲಂಘನೆ | ಜಾಗೃತಿ ಕಾರ್ಯಕ್ರಮಗಳಿಗೆ ಬೆಲೆ ಇಲ್ಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಪಟ್ಟಣದ ಸಾರ್ವಜನಿಕ ರಸ್ತೆ ಸೇರಿ ವಿವಿಧ ಬಡಾವಣೆಯ ಖಾಲಿ ಜಾಗದಲ್ಲಿ ಸಾರ್ವಜನಿಕರು ಅನಗತ್ಯ ತ್ಯಾಜ್ಯವನ್ನು ಸುರಿಯುತ್ತಿರುವ ಪರಿಣಾಮ ಜನವಸತಿ ಅನೈರ್ಮಲ್ಯ ತಾಂಡವವಾಡುತ್ತಿದೆ.

ಮಳೆಗಾಲ ಆರಂಭವಾಗಿದ್ದು ನಿಂತ ಮಲಿನ ನೀರಿನಲ್ಲಿ ಸಾಂಕ್ರಾಮಿಕ ರೋಗಗಳು ಉಲ್ಬಣಗೊಳ್ಳುವ ಸಾಧ್ಯತೆ ಹೆಚ್ಚಿರುವ ಪರಿಣಾಮ ಜನರು ಕಸವನ್ನು ಮನೆ ಬಳಿ ಬರುವ ಗಾಡಿಯಲ್ಲಿ ಸುರಿದು ಸ್ವಚ್ಛತೆಯನ್ನು ಕಾಪಾಡಬೇಕಿದೆ. ಅದನ್ನು ಮರೆತು ಖಾಲಿ ಜಾಗದಲ್ಲಿ ಕಸವನ್ನು ಸುರಿಯುತ್ತಿರುವುದು ಪಟ್ಟಣದ ಅಂದಕ್ಕೆ ಮಾರಕವಾಗುವ ಜೊತೆಗೆ ರೋಗ ಭೀತಿ ಕಾಡುತ್ತಿದೆ.

ಪಟ್ಟಣದ ಜನ ಸಂಚಾರ, ಶಾಲಾ ಕಾಲೇಜು, ದೇವಾಲಯ, ಬೈಪಾಸ್ ರಸ್ತೆ (ಗದ್ದೆಹಳ್ಳ), ಘೋರಿಕಟ್ಟೆ, ಸಂತೆಮರೂರು ರಸ್ತೆ ಬಳಿಯ ಬನ್ನಿಮಂಟಪ, ಪೇಟೆಮಾಚಗೋಡನಹಳ್ಳಿ, ಕೋಟೆ ಮಲ್ಲಿಪಟ್ಟಣ ರಸ್ತೆ ಬದಿಯಲ್ಲಿ ಬರುವ ಕೆರೆ ಜಾಗ ಸೇರಿ ಇತರೆ ಜನವಸತಿ ಪ್ರದೇಶದಲ್ಲಿ ಹಳೆ ಮನೆಯ ಹೆಂಚು, ಮರ ಮಟ್ಟುಗಳು, ಒಡೆದ ಇಟ್ಟಿಗೆ ಚೂರು ಹಾಗು ಕೋಳಿ ತ್ಯಾಜ್ಯವನ್ನು ಸುರಿಯುತ್ತಿರುವುದರಿಂದ ತ್ಯಾಜ್ಯ ಕೊಳೆತು ಗಬ್ಬುನಾತ ಬೀರುತ್ತಿದೆ. ಅದರಿಂದ ರಸ್ತೆಯಲ್ಲಿ ಸಂಚಾರ ಮಾಡುವವರು, ಸಮೀಪದ ಮನೆಗಳಲ್ಲಿ ವಾಸ ಮಾಡುವವರು, ಕೃಷಿ ಜಮೀನಿನಲ್ಲಿ ತೊಡಗಿಕೊಳ್ಳುವವರಿಗೆ ಹಾಗು ಬೆಳಿಗ್ಗೆ ಮತ್ತು ಸಂಜೆ ವಾಯು ವಿಹಾರಕ್ಕೆ ತೆರಳುವವರಿಗೆ ತುಂಬಾ ತೊಂದರೆಯಾಗುತ್ತಿದೆ.

ಪಟ್ಟಣದ ಕೋಟೆ ಪೇಟೆ ಬೈಪಾಸ್ ರಸ್ತೆ ಎರಡು ಬದಿಯಲ್ಲಿಯೂ ಕೂಡ ಅನಗತ್ಯವಾದ ತ್ಯಾಜ್ಯವನ್ನು ಸಾರ್ವಜನಿಕರು ಟ್ರ್ಯಾಕ್ಟರ್‌ಗಳಲ್ಲಿ ಬಂದು ಸುರಿದು ಹೋಗುತ್ತಿದ್ದಾರೆ. ಅಲ್ಲದೆ ಸಮೀಪದ ಜನವಸತಿ ಪ್ರದೇಶದಲ್ಲಿನ ಜನರು ಕೂಡ ಈ ಸ್ಥಳದಲ್ಲಿ ಕಸವನ್ನು ತಂದು ಹಾಕುತ್ತಿರುವುದು ಕಂಡುಬಂದಿದೆ. ಕಸ ಕೊಳೆತು ದುರ್ವಾಸನೆ ಬೀರುತ್ತಿರುವ ಪರಿಣಾಮ ಜನರು ಮೂಗುಮುಚ್ಚಿ ಓಡಾಡುವ ಪರಿಸ್ಥಿತಿ ಇದೆ. ಅಲ್ಲದೆ ಅಕ್ಕಪಕ್ಕದ ಮನೆಗಳಲ್ಲಿನ ಜನರು ನೆಮ್ಮದಿಯಿಂದ ವಾಸಿಸಲು ಸಾಧ್ಯವಾಗುತ್ತಿಲ್ಲ. ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ 17 ವಾರ್ಡ್‌ಗಳಿದ್ದು, ನಿತ್ಯವೂ ಮನೆಗಳ ಬಳಿ ಕಸದ ಗಾಡಿ ತೆರಳಿ ಕಸವನ್ನು ಸಂಗ್ರಹಣೆ ಮಾಡಲಾಗುತ್ತಿದೆ. ಹೀಗಿದ್ದರೂ ಕೂಡ ಜನ ವಸತಿ ಪ್ರದೇಶದ ಜನರು ಸಾರ್ವಜನಿಕ ರಸ್ತೆ ಬಳಿ ಸುರಿದು ಹೋಗಿ ಮಲಿನತೆಯನ್ನು ಹರಡಲು ಕಾರಣವಾಗುವುದಲ್ಲದೆ ಪರಿಸರಕ್ಕೆ ಧಕ್ಕೆ ಉಂಟಾಗುತ್ತಿದೆ.




### ಚರಂಡಿಯಲ್ಲಿ ಮಲೀನ ನೀರು

ಪಟ್ಟಣದ ಪಾರ್ಕ್ ಸಮೀಪ ಜನವಸತಿ ಪ್ರದೇಶದ ನೀರು ಹರಿಯಲು ಚರಂಡಿ, ಸೇತುವೆ ನಿರ್ಮಿಸಲಾಗಿದೆ. ಚರಂಡಿಗೆ ತ್ಯಾಜ್ಯ, ಮಣ್ಣು, ಕಲ್ಲುಗಳನ್ನು ಜನರು ಸುರಿಯುತ್ತಿರುವುದರಿಂದ ನೀರು ಹರಿಯಲು ಸಾಧ್ಯವಾಗದೇ ಕಟ್ಟಿಕೊಂಡು ಮಲೀನತೆ ಉಂಟಾಗಿದೆ. ಅದರಿಂದ ಪಾರ್ಕ್‌ಗೆ ಬರುವ ಜನರಿಗೆ ಸೊಳ್ಳೆಗಳ ಕಾಟದ ಜೊತೆ ದುರ್ವಾಸನೆ ಬೀರುತ್ತಿದೆ.

ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿನ ಸಾರ್ವಜನಿಕರು ಹಾಗೂ ಕಟ್ಟಡ ನಿರ್ಮಾಣ ಮಾಡುವ ಮಾಲೀಕರು ಕಟ್ಟಡ ನಿರ್ಮಾಣ ಮತ್ತು ಭಗ್ನಾವಶೇಷಗಳ ತ್ಯಾಜ್ಯಗಳನ್ನು ರಸ್ತೆ ಬದಿ, ಕೆರೆ, ನದಿ, ಮುಂತಾದ ಖಾಲಿ ಜಾಗದಲ್ಲಿ ಹಾಕುವುದನ್ನು ನಿಷೇಧಿಸಲಾಗಿದೆ. ಅದನ್ನು ಉಲ್ಲಂಘನೆ ಮಾಡಿ ತ್ಯಾಜ್ಯ ಹಾಕುವುದು ಕಂಡುಬಂದರೆ 500 ರೂ. ದಂಡ ವಿಧಿಸಲಾಗುವುದು. ಸಾರ್ವಜನಿಕರು ಬಯಸಿದ್ದಲ್ಲಿ ಪಟ್ಟಣ ಪಂಚಾಯಿತಿಗೆ ಸೇವಾ ಶುಲ್ಕ ಭರಿಸಿ ವಾಹನದಲ್ಲಿ ತ್ಯಾಜ್ಯ ವಸ್ತುಗಳನ್ನು ನೆಲಭರ್ತಿ ಜಾಗಕ್ಕೆ ಸಾಗಿಸುವ ಸೇವೆಯನ್ನು ಒದಗಿಸಲಾಗಿದೆ.

> ಮುಂಗಾರು ಮಳೆ ನಿರೀಕ್ಷೆಯಲ್ಲಿದ್ದು, ನಿತ್ಯವೂ ಬಳಕೆ ಮಾಡುವ ನೀರನ್ನು ಬದಲಿಸಬೇಕು. ಮನೆ ಮುಂದೆ ನೀರು ನಿಲ್ಲದಂತೆ ಎಚ್ಚರಿಕೆ ಸಹ ವಹಿಸಬೇಕಿದೆ. ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಸ್ವಚ್ಛತೆ ನಿರ್ವಹಣೆ ಕುರಿತು ಪಟ್ಟಣ ಪಂಚಾಯಿತಿ, ಆಯಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. ಆರೋಗ್ಯ ಇಲಾಖೆಯೊಂದಿಗೆ ಸಾರ್ವಜನಿಕರು, ಇತರೆ ಇಲಾಖೆ ಅಧಿಕಾರಿಗಳು ಕೈಜೋಡಿಸಿ ಸಾಂಕ್ರಾಮಿಕ ರೋಗ ತಡೆಗಟ್ಟಲು ಸಹಕಾರ ನೀಡಬೇಕಿದೆ.
>
> **– ಡಾ. ಪುಷ್ಪಲತಾ, ತಾಲ್ಲೂಕು ಆರೋಗ್ಯಾಧಿಕಾರಿ**

# ಅಪಘಾತದಲ್ಲಿ ಮಹಿಳೆ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಕೊಣನೂರು: ರಸ್ತೆ ಮಧ್ಯೆ ಹಾಕಿದ್ದ ಹಂಪ್ಸ್ ದಾಟಿಸಲು ಆಗದ ಪರಿಣಾಮ ಬೈಕ್ ಹಿಂಬದಿ ಕುಳಿತಿದ್ದ ಮಹಿಳೆ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಕೊಣನೂರು ಹೋಬಳಿ ಉಳ್ಳೇನಹಳ್ಳಿಯಲ್ಲಿ ನಡೆದಿದೆ.

ಕುಶಾಲನಗರ ತಾಲ್ಲೂಕು ಬಾಣಾವರ ಗ್ರಾಮದ ರಾಜೇಶ್ವರಿ (30) ಮೃತರು. ತಮ್ಮ ಮಗನೊಂದಿಗೆ ಕೊಣನೂರಿಗೆ ಹೋಗುತ್ತಿದ್ದಾಗ ರಸ್ತೆಗೆ ಅಡ್ಡಲಾಗಿ ಹಾಕಿದ್ದ ಹಂಪ್ಸ್ ಗೊತ್ತಾಗದೆ ಸವಾರ ನಿಯಂತ್ರಣ ತಪ್ಪಿ ಕೆಳಗೆ ಬಿದ್ದಿದ್ದಾನೆ. ತಲೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ಮಹಿಳೆ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬೈಕ್ ಸವಾರನಿಗೂ ಗಾಯಗಳಾಗಿದ್ದು ಹಿಮ್ಸ್‌ಗೆ ದಾಖಲಿಸಲಾಗಿದೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಸ್ತೆಯಲ್ಲಿ ಅವೈಜ್ಞಾನಿಕ ಹಂಪ್ಸ್ ಅಳವಡಿಸಿರುವುದೇ ಅಪಘಾತಕ್ಕೆ ಕಾರಣವೆಂದು ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಅವೈಜ್ಞಾನಿಕವಾಗಿ ರಸ್ತೆ ಉಬ್ಬು ನಿರ್ಮಿಸಲಾಗಿದೆ. ಇಲ್ಲಿ ಸೂಚನಾ ಫಲಕಗಳನ್ನು ಅಳವಡಿಸಿಲ್ಲ. ರಾತ್ರಿ ಹೊತ್ತು ಸಂಚರಿಸುವವರಿಗೆ ರಸ್ತೆಯಲ್ಲಿ ಹಂಪ್ಸ್ ಇರುವುದು ಗೊತ್ತಾಗುವುದಿಲ್ಲ. ಭಾರೀ ಗಾತ್ರದ ಹಂಪ್ಸ್ ಹಾಕಿರುವುದರಿಂದ ವಾಹನ ಸವಾರರು ನಿಯಂತ್ರಣ ತಪ್ಪಿ ಬೀಳುವಂತಾಗಿದೆ. ಈ ಸ್ಥಳದಲ್ಲಿ ಅಪಘಾತಗಳು ಮರುಕಳಿಸುತ್ತಿವೆ. ಸಮಸ್ಯೆಗೆ ಪರಿಹಾರ ಕಲ್ಪಿಸಬೇಕೆಂದು ಒತ್ತಾಯಿಸಿದರು.

# ಅಭಿನಂದನಾ ಕಾರ್ಯಕ್ರಮ ಮುಂದೂಡಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸ್ಕೌಟ್ಸ್ ಅಂಡ್ ಗೈಡ್ಸ್ ಜಿಲ್ಲಾ ಆಯುಕ್ತ ವೈ.ಎಸ್.ವೀರಭದ್ರಪ್ಪ ಅವರಿಗೆ ಜೂನ್ 24ರಂದು ಹಿರಿಯ ನಾಗರಿಕ ವೇದಿಕೆ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಸಮಾರಂಭವನ್ನು ಜುಲೈ 12ಕ್ಕೆ ಮುಂದೂಡಲಾಗಿದೆ ಎಂದು ಅಭಿನಂದನಾ ಕಾರ್ಯಕ್ರಮದ ಸಂಚಾಲಕ ರವಿ ನಾಕಲಗೂಡು ತಿಳಿಸಿದ್ದಾರೆ.

ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಕಾರಣಾಂತರಗಳಿಂದ ಮುಂದೂಡಲಾಗಿದ್ದು, ಜುಲೈ 12ರಂದು ನಿಗದಿಪಡಿಸಲಾಗಿದೆ. ಸುತ್ತೂರು ಮಠದ ಶಿವರಾತ್ರಿದೇಶಿ ಕೇಂದ್ರ ಸ್ವಾಮೀಜಿ ಹಾಗು ಜಿಲ್ಲೆಯ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ವೀರಭದ್ರಪ್ಪ ಅವರು ಕಳೆದ 50 ವರ್ಷಗಳಿಂದ ವಿವಿಧ ಸಂಘ ಸಂಸ್ಥೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಸಮಾಜದ ಸುಧಾರಣೆಗಾಗಿ ಹಲವು ವಿನೂತನ ಕಾರ್ಯಕ್ರಮ ಆಯೋಜನೆ ಮಾಡುವ ಮೂಲಕ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಅವರ ಅಭಿನಂದನಾ ಗ್ರಂಥ ಬಿಡುಗಡೆ ಹಾಗೂ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದ್ದಾರೆ.

# ವಾಲಿಬಾಲ್ ಪಂದ್ಯಾವಳಿ ತಮಿಳುನಾಡು ತಂಡ ಪ್ರಥಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಾಜಿ ಸಚಿವ ಹೆಚ್.ಸಿ.ಶ್ರೀಕಂಠಯ್ಯ ಅವರ ಜನ್ಮ ಶತಮಾನೋತ್ಸವ ಅಂಗವಾಗಿ ಪಟ್ಟಣದ ಮಾಧ್ಯಮಿಕ ಶಾಲಾ ಆವರಣದಲ್ಲಿ ನಡೆದ ಮೂರು ದಿನಗಳ ಹೊನಲು ಬೆಳಕಿನ ರಾಷ್ಟ ಮಟ್ಟದ ವಾಲಿಬಾಲ್ ಪಂದ್ಯಾವಳಿಯಲ್ಲಿ ಕೇರಳದ ಕೆಎಸ್‌ಇಬಿ ತಂಡವನ್ನು ಮಣಿಸಿ ತಮಿಳುನಾಡು ಯುನೈಟೆಡ್ ಸ್ಟ್ರೈಕರ್ಸ್ ತಂಡ ಪ್ರಥಮ ಸ್ಥಾನ ಗಳಿಸಿತು.

ಮೂರು ಸುತ್ತುಗಳಲ್ಲಿ ನಡೆದ ಅಂತಿಮ ಪಂದ್ಯದಲ್ಲಿ ಮೊದಲ ಸೆಟ್‌ನಲ್ಲಿ 14-25 ಅಂಕಗಳಿಂದ ಹಿನ್ನಡೆ ಅನುಭವಿಸಿದ್ದ ತಮಿಳುನಾಡು ತಂಡ ನಂತರ 25-23 ಅಂಕಗಳಿಸಿ ಸಮಬಲದ ಹೋರಾಟ ನೀಡಿ ಅಂತಿಮ ಸೆಟ್‌ನಲ್ಲಿ 25-21 ಅಂಕಗಳಿಂದ ಗೆಲುವು ದಾಖಲಿಸಿತು.

ಮೂರು ಮತ್ತು ನಾಲ್ಕನೇ ಸ್ಥಾನಕ್ಕೆ ಮುಂಬೈ ತಂಡ ಹಾಗೂ ಹಿರೀಸಾವೆ ಅಣ್ಣಯ್ಯ ತಂಡ 30 ಅಂಕಗಳ ಒಂದು ಸೆಟ್‌ನಲ್ಲಿ ಮುಂಬೈ ತಂಡ ಗೆಲುವು ಸಾಧಿಸಿತು. ಅಂತಿಮ ಪಂದ್ಯ ವೀಕ್ಷಿಸಿದ ಶಾಸಕ ಕೆ.ಎಂ. ಶಿವಲಿಂಗೇಗೌಡ, ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ ಮತ್ತಿತರರು ಆಟಗಾರರು ಹಾಗೂ ತೀರ್ಪುಗಾರರನ್ನು ಅಭಿನಂದಿಸಿದರು.

ಮಾಜಿ ಶಾಸಕ ಸಿ.ಎಸ್.ಪುಟ್ಟೇಗೌಡ ಮಾತನಾಡಿ, ರಾಜಕಾರಣದಲ್ಲಿ ದ್ವೇಷ, ಅಸೂಯೆ ಹೆಚ್ಚಿರುವ ದಿನಗಳಲ್ಲಿ ಅದ್ಯಾವುದನ್ನು ಮೈಗಂಟಿಸಿಕೊಳ್ಳದೇ 5 ದಶಕಗಳಿಗೂ ಹೆಚ್ಚು ಕಾಲ ಉತ್ತಮ ರಾಜಕಾರಣಿಯಾಗಿದ್ದವರು ಹೆಚ್.ಸಿ.ಶ್ರೀಕಂಠಯ್ಯ ಎಂದರು.

ಶ್ರೀಕಂಠಯ್ಯ ಅವರ ರಾಜಕೀಯ ಶಕ್ತಿ ಇತ್ತೀಚಿನ ಯುವಕರಿಗೆ, ಯುವ ರಾಜಕಾರಣಿಗಳಿಗೆ ತಿಳಿದಿಲ್ಲ. ರಾಜಕೀಯವಾಗಿ ಶಿಸ್ತು, ಸೇವೆ, ಬದ್ಧತೆ ಹೊಂದಿದ್ದ ಅತ್ಯಂತ ಎತ್ತರದ ವ್ಯಕ್ತಿ ಅವರಾಗಿದ್ದರು. ತಾಲ್ಲೂಕಿನ ಪ್ರತಿ ಕುಟುಂಬಕ್ಕೆ, ಬಡವರಿಗೆ ಆಸರೆಯಾಗಿದ್ದರು. ಮಕ್ಕಳ ವಿದ್ಯಾಭ್ಯಾಸ, ಕೆಲಸ, ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದ ವ್ಯಕ್ತಿ. ಇಂದಿಗೂ ಶ್ರೀಕಂಠಯ್ಯನವರ ಹೆಸರಿನಲ್ಲಿ ಅದೆಷ್ಟು ಕುಟುಂಬಗಳು ಜೀವನ ಕಂಡುಕೊಡಿವೆ. ಜಿಲ್ಲೆಯ ಅಭಿವೃದ್ಧಿಗೆ ಅವರ ಸೇವೆ ಅನನ್ಯವಾದದ್ದು, ಅವರ ಸೇವಾ ಮನೋಭಾವದಿಂದಲೇ ಅಣ್ಣಯ್ಯ ಎಂಬ ಪರಿಚತರಾಗಿದ್ದರು. ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಲ್ಲಿಯೂ ಖ್ಯಾತಿ ಪಡೆದಿದ್ದರು. ಇಂದಿಗೂ ಅವರ ಹೆಸರು ರಾಜ್ಯ ರಾಜಕೀಯದಲ್ಲಿ ಅಚ್ಚಳಿಯದೇ ಉಳಿದಿದೆ ಎಂದರು.

ರಾಜಕೀಯವಾಗಿ ಅವರನ್ನು ಹತ್ತಿರದಿಂದ ಬಲ್ಲವನು ನಾನು. ಅವರ ಎದುರು ಸೋತವನು. ಗೆದ್ದವನು, ನನಗೆ ರಾಜಕೀಯವಾಗಿ ಶಕ್ತಿ ಮತ್ತು ವೈಚಾರಿಕತೆ ಇದೆ ಎಂದರೇ ಅವರ ಒಡನಾಟ ಕಾರಣ. ಅವರ 100ನೇ ವರ್ಷದ ಜನ್ಮ ದಿನಾಚರಣೆಯನ್ನು ಅವರ ಮೊಮ್ಮಗ ಹಾಗು ಕರ್ನಾಟಕ ವಿದ್ಯುತ್ ಕಾರ್ಖಾನೆ ಅಧ್ಯಕ್ಷ ಹೆಚ್.ಸಿ.ಲಲಿತ್ ರಾಘವ್ ಮತ್ತು ಹೆಚ್.ಎಸ್.ವಿಜಯಕುಮಾರ್ ಕುಟುಂಬ ಅತ್ಯಂತ ವಿಜೃಂಭಣೆಯಿದ ಮಾಡುತ್ತಿದೆ. ಅದಕ್ಕೆ ತಾಲ್ಲೂಕಿನ ಪ್ರತಿ ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು, ಜನಸಾಮಾನ್ಯರು ಸಹಕಾರ ನೀಡಬೇಕು. ಈಗಾಗಲೇ ಯುವಕರಿಗೆ ಕೌಶಲ್ಯ ತರಬೇತಿ, ಸ್ಪೀಕಿಂಗ್ ಕೋರ್ಸ್‌ನಂತಹ ತರಬೇತಿ ನೀಡುತ್ತಿದ್ದು, ಯುವಕರನ್ನು ಕ್ರೀಡೆಯತ್ತ ಸೆಳೆಯುವ ಸಲುವಾಗಿ ರಾಷ್ಟಮಟ್ಟದ ವಾಲಿಬಾಲ್ ಪಂದ್ಯಾವಳಿ ಆಯೋಜಿಸಿದ್ದು ಅವರ ಪ್ರಯತ್ನಕ್ಕೆ ಶುಭವಾಗಲಿ ಎಂದರು.

ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಎಲ್.ಪಿ.ಪ್ರಕಾಶ್‌ಗೌಡ ಮಾತನಾಡಿ, ತಾಲ್ಲೂಕಿನಲ್ಲಿ ಶ್ರೀಕಂಠಯ್ಯ ಅವರು ಮಾಡಿರುವ ಅಭಿವೃದ್ಧಿ ಕಾರ್ಯಗಳು ಶಾಶ್ವತವಾಗಿವೆ. ಸಹಕಾರ ಸಕ್ಕರೆ ಕಾರ್ಖಾನೆ, ಬಸ್ ನಿಲ್ದಾಣ, ಕೋರ್ಟ್ ಸಂಕೀರ್ಣ, ಸರ್ಕಾರಿ ಶಾಲಾ ಕಾಲೇಜುಗಳ ಕೊಡುಗೆಗಳನ್ನು ಜನ ಎಂದೆಂದಿಗೂ ಸ್ಮರಿಸುತ್ತಾರೆ ಎಂದರು.

ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಹೆಚ್.ಎಸ್.ವಿಜಯ್‌ಕುಮಾರ್, ಹೆಚ್.ಸಿ.ಲಲಿತ್ ರಾಘವ್, ಮುಖಂಡರಾದ ಎಂ.ಎ.ರಂಗಸ್ವಾಮಿ, ಜೆ.ಎಂ.ರಾಮಚಂದ್ರ, ಎಂ.ಶಂಕರ್, ಎನ್.ಡಿ.ಕಿಶೋರ್, ಸಿ.ಟಿ.ಅಶೋಕ್‌ಕುಮಾರ್, ದಿಡಗ ಬಾಲಣ್ಣ, ಅಣತಿ ಆನಂದ್‌ಕುಮಾರ್, ಎಂ.ಕೆ.ಮಂಜೇಗೌಡ, ಎ.ಬಿ.ನಂಜುಂಡೇಗೌಡ, ವಿ.ಜಿ. ಅಶೋಕ್, ಉದಯ್‌ಕುಮಾರ್, ವಾಸು, ಸುಹೀಲ್ ಪಾಷ ಮತ್ತಿತರರಿದ್ದರು.

# ಪಿರುಮನಹಳ್ಳಿ ಕಿರಿಯ ಪ್ರಾಥಮಿಕ ಶಾಲೆಗೆ ಜಿಪಂ ಸಿಇಓ ದಿಢೀರ್ ಭೇಟಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲ್ಲೂಕಿನ ಪಿರುಮನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ ಅವರು ಭೇಟಿ ನೀಡಿ ವ್ಯಾಸಂಗ ಮಾಡುತ್ತಿರುವ ಬಿಹಾರ ಮೂಲದ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದರು.

ಮಧ್ಯಾಹ್ನ ಶಾಲೆಗೆ ಭೇಟಿ ನೀಡಿದ ಅವರು ಬಿಹಾರದ ಮಕ್ಕಳಿಗೆ ಕನ್ನಡ ಕಲಿಸುತ್ತಿರುವ ಶಿಕ್ಷಕಿ ಎಸ್.ಪಿ.ಪ್ರಮಿಳಾ ಅವರ ಕಾಳಜಿಯನ್ನು ಕೊಂಡಾಡಿದರು. ಶಾಲೆಗೆ ಅಡುಗೆ ಸಿಬ್ಬಂದಿ ನಿಯೋಜನೆ, ಛಾವಣಿ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದಲ್ಲಿ ಕಳೆದ ಹತ್ತು ವರ್ಷಗಳಿಂದಲೂ ಚಿಂದಿ ಆಯುವ, ಶುಂಠಿ ಕೆಲಸ ಮಾಡಿಕೊಂಡು ಬದುಕುತ್ತಿರುವ ಪೋಷಕರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಲು ಹಿಂದೇಟು ಹಾಕುತ್ತಿದ್ದರು. ರಸ್ತೆ ಬದಿಯಲ್ಲಿ ಆಟವಾಡಿಕೊಂಡಿದ್ದ ಮಕ್ಕಳನ್ನು ಕಂಡ ಪಿರುಮನಹಳ್ಳಿ ಶಾಲೆಯ ಶಿಕ್ಷಕಿ ಪ್ರಮಿಳಾ ಅವರು ಪೋಷಕರ ಮನವೊಲಿಸಿ ತಮ್ಮ ಶಾಲೆಗೆ ದಾಖಲು ಮಾಡಿಕೊಂಡಿದ್ದರು. ನಾಲ್ಕು ವರ್ಷಗಳ ಹಿಂದೆ ಇಬ್ಬರು ಮಕ್ಕಳನ್ನು ಕರೆದುಕೊಂಡು ಹೋಗುತ್ತಿದ್ದ ಅವರು ಪ್ರಸ್ತುತ 8 ಮಕ್ಕಳಿಗೆ ನೆರವಾಗಿದ್ದಾರೆ. ನಿತ್ಯ ತಾವು ಹೋಗುವ ಆಟೋದಲ್ಲೇ ಬಿಹಾರದ ಮಕ್ಕಳನ್ನು ಕರೆದೊಯ್ಯುತ್ತಾರೆ. ತಿಂಗಳಿಗೆ 8 ಸಾವಿರ ರೂ. ಬಾಡಿಗೆಯನ್ನು ಶಿಕ್ಷಕಿಯೇ ಭರಿಸುತ್ತಾರೆ. ಭಾಷಾ ಸಮಸ್ಯೆಯಿಂದ ಆರಂಭದಲ್ಲಿ ಮಕ್ಕಳೊಂದಿಗೆ ಸಂವಹನ ಕಷ್ಟವಾದರೂ ವಿದ್ಯಾರ್ಥಿಗಳಿಗೆ ಶಿಕ್ಷಣ ಕೊಡಿಸಬೇಕೆಂದು ಶಿಕ್ಷಕಿ ಪ್ರಮಿಳಾ ಅವರು ಸಾಕಷ್ಟು ಪರಿಶ್ರಮಪಟ್ಟಿದ್ದಾರೆ. ಈಗ ಎಂಟು ವಿದ್ಯಾರ್ಥಿಗಳು ಸ್ಪಷ್ಟವಾಗಿ ಕನ್ನಡ ಮಾತನಾಡುವುದಲ್ಲದೇ ಬರೆಯುತ್ತಾರೆ. ಶಿಕ್ಷಕಿಯ ಈ ಮಾನವೀಯತೆಯನ್ನು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಣ್ಣಿಸಿದ್ದಾರೆ.

1 ರಿಂದ 5ನೇ ತರಗತಿ ವರೆಗೆ ಪಿರುಮನಹಳ್ಳಿ ಶಾಲೆಯಲ್ಲಿ ಓದಿರುವ ಮಕ್ಕಳಿಗೆ ಮುಂದಿನ ಶಿಕ್ಷಣದ್ದೇ ಚಿಂತೆಯಾಗಿದೆ. ಆಧಾರ್ ಕಾರ್ಡ್ ಇಲ್ಲದೆ ದಾಖಲಾತಿ ಮಾಡಿಕೊಳ್ಳುವುದಿಲ್ಲವೆಂದು ಬೇರೆ ಸರ್ಕಾರಿ ಶಾಲೆಯ ಶಿಕ್ಷಕರು ಈಗಾಗಲೇ ಹೇಳಿರುವುದರಿಂದ ಮಕ್ಕಳ ಭವಿಷ್ಯ ಅತಂತ್ರವಾಗುವ ಆತಂಕ ಕಾಡುತ್ತಿದೆ. ಪೋಷಕರು ಅನಕ್ಷರಸ್ಥರಾಗಿರುವುದರಿಂದ ತಮ್ಮ ಮಕ್ಕಳ ಜನನ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮಾಡಿಸಿಲ್ಲ. ಈ ದಾಖಲೆ ಇಲ್ಲದೆ ವ್ಯಾಸಂಗ ಮಾಡಬಹುದಾದರೂ ಶಿಕ್ಷಕರು ಜವಾಬ್ದಾರಿ ವಹಿಸಿಕೊಳ್ಳಲು ಸಾಧ್ಯವಿಲ್ಲ. ಮಕ್ಕಳ ಹೆಸರಿನಲ್ಲಿ ಆಧಾರ್ ಕಾರ್ಡ್ ಪಡೆಯಬೇಕೆಂದರೆ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಬೇಕಿದೆ. ಆ ಪ್ರಕ್ರಿಯೆಗೆ ಪೋಷಕರು ಸುತಾರಾಂ ತಯಾರಿಲ್ಲ. ಹೀಗಾಗಿ ಮಕ್ಕಳ ಶಿಕ್ಷಣ ಡೋಲಾಯಮಾನವಾಗುತ್ತದೆಂಬ ಆತಂಕ ಕಾಡುತ್ತಿದೆ. ಈ ಸಮಸ್ಯೆಯನ್ನು ಆಲಿಸಿರುವ ಶುಭಂ ಶುಕ್ಲಾ ಅವರು, ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದು ಆಧಾರ್ ಕಾರ್ಡ್ ಮಾಡಿಸಿಕೊಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಎಲ್ಲವೂ ಅಂದುಕೊಂಡಂತೆ ಆದರೆ ಶೀಘ್ರದಲ್ಲೇ ಮಕ್ಕಳು ಆಧಾರ್ ಪಡೆಯಲಿದ್ದಾರೆ.

ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಶುಭಂ ಶುಕ್ಲಾ ಅವರ ದಿಢೀರ್ ಭೇಟಿ ಪಿರುಮನಹಳ್ಳಿಯಲ್ಲಿ ಸಂಚಲನ ಸೃಷ್ಟಿಸಿದೆ. ಶಿಕ್ಷಣ ಇಲಾಖೆ ಸಂಪನ್ಮೂಲ ಅಧಿಕಾರಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ದೂರವಾಣಿ ಮೂಲಕ ಸಂಪರ್ಕಿಸಿದ ಶುಭಂ ಶುಕ್ಲಾ ಮಕ್ಕಳಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸುವಂತೆ ನಿರ್ದೇಶನ ನೀಡಿದ್ದಾರೆ.

## ಇತಿಹಾಸದಲ್ಲಿ ಈ ದಿನ

### ಜೂನ್-10

1692: ಅಮೆರಿಕದ ಮ್ಯಾಸಚೂಸೆಟ್ಸ್ ರಾಜ್ಯದಲ್ಲಿ ನಡೆದ ಸೇಲಂ ಮಾಟಗಾತಿ ಪ್ರಕರಣದಲ್ಲಿ ಬ್ರಿಡ್ಜೆಟ್ ಬಿಷಪ್ ಅವರಿಗೆ ಮೊದಲ ಬಾರಿಗೆ ಮರಣದಂಡನೆ ವಿಧಿಸಲಾಯಿತು.

1940: ಇಟಲಿ, ಬ್ರಿಟನ್ ಮತ್ತು ಫ್ರಾನ್ಸ್ ವಿರುದ್ಧ ಯುದ್ಧ ಘೋಷಿಸುವ ಮೂಲಕ ದ್ವಿತೀಯ ಮಹಾಯುದ್ಧಕ್ಕೆ ಅಧಿಕೃತವಾಗಿ ಪ್ರವೇಶಿಸಿತು.

1963: ಅಮೆರಿಕದ ಅಧ್ಯಕ್ಷ John F. Kennedy ಅವರು ಮಹಿಳೆಯರು ಮತ್ತು ಪುರುಷರಿಗೆ ಸಮಾನ ವೇತನ ನೀಡುವ ಉದ್ದೇಶದ ಈಕ್ವಲ್ ಪೇ ಆಕ್ಟ್‌ಗೆ ಸಹಿ ಹಾಕಿದರು.

1967: ಆರು ದಿನಗಳ ಯುದ್ಧ (Six-Day War) ಅಂತ್ಯಗೊಂಡು ಇಸ್ರೇಲ್ ಮತ್ತು ಸಿರಿಯಾ ನಡುವೆ ಕದನ ವಿರಾಮ ಜಾರಿಯಾಯಿತು.

2003: ಅಮೆರಿಕದ ಬಾಹ್ಯಾಕಾಶ ಸಂಸ್ಥೆ ಮಂಗಳ ಗ್ರಹದ ಅಧ್ಯಯನಕ್ಕಾಗಿ ಸ್ಪಿರಿಟ್ ರೋವರ್ ಅನ್ನು ಉಡಾವಣೆ ಮಾಡಿತು.

**ಜನನ**

1921: ಬ್ರಿಟನ್ ರಾಜಮನೆತನದ ಸದಸ್ಯ

1922: ಖ್ಯಾತ ಅಮೆರಿಕನ್ ನಟಿ ಹಾಗೂ ಗಾಯಕಿ

# ವಿದ್ಯುತ್ ನಿಗಮ ಉಳಿವಿಗಾಗಿ ಬೃಹತ್ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ರಾಜ್ಯದ ವಿವಿಧ ಎಸ್ಕಾಂಗಳ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಮಾಡಲು ಟಾಟಾ ಪವರ್ ಕಂಪನಿಯು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ ಪರವಾನಗಿ ಕೋರಿ ಅರ್ಜಿ ಸಲ್ಲಿಸಿರುವುದನ್ನು ಖಂಡಿಸಿ ನೌಕರರ ಒಕ್ಕೂಟವು ಸೋಮವಾರ ಸೆಸ್ಕಾಂ ವಿಭಾಗೀಯ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಕೆಪಿಟಿಸಿಎಲ್ 659 ನೌಕರರ ಸಂಘದ ಕೇಂದ್ರ ಸಮಿತಿ ಸದಸ್ಯ ಹರೀಶ್ ಮಾತನಾಡಿ, ವಿದ್ಯುತ್ ಇಲಾಖೆಯನ್ನು ಖಾಸಗೀಕರಣ ಮಾಡುತ್ತಿರುವುದರಿಂದ ಮುಂದಿನ ದಿನದಲ್ಲಿ ಪ್ರತಿಯೊಬ್ಬರಿಗೂ ತೊಂದರೆಯಾಗಲಿದೆ. ಇಂಧನ ಇಲಾಖೆ ಸಾರ್ವಜನಿಕರ ಆಸ್ತಿ. ಅದನ್ನು ಖಾಸಗಿಕರಣ ಮಾಡುತ್ತಿರುವುದು ಎಷ್ಟರ ಮಟ್ಟಿಗೆ ಸರಿ. ಒಕ್ಕೂಟವು ರಾಜ್ಯದ ಎಲ್ಲಾ ವರ್ಗದ ಗ್ರಾಹಕರ ಮತ್ತು ಎಸ್ಕಾಂಗಳ ನೌಕರರ ಹಿತ ಕಾಯಲು ಬದ್ಧವಾಗಿದೆ. ರಾಜ್ಯದಲ್ಲಿ ಅದ್ಭುತ ತಾಂತ್ರಿಕ ಸಾಮರ್ಥ್ಯ, ಮೂಲಸೌಕರ್ಯ ಮತ್ತು ಸುಗಮ ಆಡಳಿತ ನಿರ್ವಹಣೆ ಇರುವಾಗ ರಾಜ್ಯದ ವಿದ್ಯುತ್ ವಿತರಣಾ ಜಾಲವನ್ನು ಹೊರ ರಾಜ್ಯದ ಖಾಸಗಿ ಸಂಸ್ಥೆಗೆ ಹಸ್ತಾಂತರಿಸಲು ಬಿಡುವುದಿಲ್ಲ. ಕೆಇಆರ್‌ಸಿ, ವಿದ್ಯುತ್ ವಿತರಣಾ ಜಾಲದ ಖಾಸಗೀಕರಣ ನಿರ್ಧಾರವನ್ನು ಕೈಬಿಟ್ಟು ಟಾಟಾ ಪವರ್ ಸಂಸ್ಥೆಯ ಅರ್ಜಿಯನ್ನು ತಿರಸ್ಕರಿಸಬೇಕು. ಯಾವುದೇ ಕಾರಣಕ್ಕೂ ವಿದ್ಯುತ್ ಕ್ಷೇತ್ರ ಕಾರ್ಪೊರೇಟ್ ಕಂಪನಿಗಳ ಪಾಲಾಗಬಾರದು. ಕೆಪಿಟಿಸಿಎಲ್ ಹಾಗೂ ಐದು ಎಸ್ಕಾಂಗಳ ವ್ಯಾಪ್ತಿಯಲ್ಲಿ ವಿದ್ಯುತ್ ವಿತರಣೆಗೆ ಟಾಟಾ ಪವರ್ ಕಂಪನಿ ಪರವಾನಗಿ ಪಡೆಯುತ್ತಿರುವುದು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ವ್ಯವಸ್ಥಿತ ಸಂಚು. ಹೀಗಾಗಿ ಪರವಾನಗಿ ನೀಡುವುದಕ್ಕೆ ಆಕ್ಷೇಪಣೆ ಸಲ್ಲಿಸಬೇಕೆಂದರು.

ಸೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ಕೃಷ್ಣ ಅವರು ಮಾತನಾಡಿ, ಸರ್ಕಾರ ರಾಜ್ಯದ ವಿದ್ಯುತ್ ವಿತರಣಾ ವಲಯವನ್ನು ಕಾರ್ಪೊರೇಟ್ ಕಂಪನಿಗಳಿಗೆ ಧಾರೆ ಎರೆಯಲು ಹೊರಟಿದೆ. ರಾಜ್ಯದ ಜನರ ಆಸ್ತಿಯಾಗಿರುವ ವಿದ್ಯುತ್ ವಲಯವನ್ನು ಖಾಸಗೀಕರಣಗೊಳಿಸುವುದು ಅಪಾಯಕಾರಿ ಎಂದರು. ಕೆಇಆರ್‌ಸಿಗೆ ಆಕ್ಷೇಪಣೆ ಸಲ್ಲಿಸಲು 2026ರ ಜೂ.23ರ ವರೆಗೆ ಮಾತ್ರ ಸಮಯ ನೀಡಲಾಗಿದೆ. ಹೀಗಾಗಿ ನೌಕರರು ಹಾಗೂ ಸಾರ್ವಜನಿಕರು, ರೈತರು ಪ್ರಸ್ತಾವನೆ ವಿರುದ್ಧ ಆಕ್ಷೇಪಣಾ ಅರ್ಜಿ ಸಲ್ಲಿಸಬೇಕೆಂದು ಆಗ್ರಹಿಸಿದರು.

ಎಲ್‌ಟಿ ರೇಟಿಂಗ್ ಸಹಾಯಕ ಕಾರ್ಯಪಾಲಕ ಅಭಿಯಂತರ ಸತೀಶ್, ಕೆಪಿಟಿಸಿಎಲ್ 659 ನೌಕರರ ಸಂಘದ ಅಧ್ಯಕ್ಷ ಅಶೋಕ್, ಕಾರ್ಯದರ್ಶಿ ಮಂಜುನಾಥ್, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಮಲ್ಲಪ್ಪಚಾರ್ ಮತ್ತಿತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248